ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1767 (2009)
ಸದಸ್ಯರ ಹೆಸರು	ಶ್ರೀ ಆರ್.ಬಿ.ತಿಮ್ಮಾಪೂರ್
ಉತ್ತರಿಸುವ ದಿನಾಂಕ	24-03-2021
ಉತ್ತರಿಸುವವರು	ಹಿಂದೂ ಧಾರ್ಮಿಕ ಮತ್ತು ಧರ್ಮಾದಾಯ ದತ್ತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

	ಪ್ರಶ್ನೆ	ಉತ್ತರ
ಅ)	ರಾಜ್ಯದ ಮುಜರಾಯಿ ದೇವಸ್ಥಾನಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಅರ್ಚಕರನ್ನು ನೇಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ:	ಧಾರ್ಮಿಕ ದತ್ತಿ ಇಲಾಖೆಯಲ್ಲಿ ಪ್ರಸಕ್ತ ಧಾರ್ಮಿಕ ದತ್ತಿ ಇಲಾಖಾ ವ್ಯಾಪ್ತಿಯಲ್ಲಿರುವ ದೇವಸ್ಥಾನಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಅರ್ಚಕರನ್ನು ನೇಮಿಸುವ ಕುರಿತಂತೆ ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲ.
ಆ)	ಕೇರಳ ರಾಜ್ಯದಲ್ಲಿರುವಂತೆ ನಮ್ಮ ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಅರ್ಚಕರನ್ನು ರಾಜ್ಯದ ಮುಜರಾಯಿ ದೇವಸ್ಥಾನಗಳಲ್ಲಿ ನೇಮಕಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?	ಕೇರಳ ರಾಜ್ಯದಲ್ಲಿರುವಂತೆ ನಮ್ಮ ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಅರ್ಚಕರನ್ನು ರಾಜ್ಯದ ಧಾರ್ಮಿಕ ದತ್ತಿ ಇಲಾಖಾ ವ್ಯಾಪ್ತಿಯಲ್ಲಿರುವ ದೇವಸ್ಥಾನಗಳಲ್ಲಿ ನೇಮಕಗೊಳಿಸುವುದಕ್ಕೆ ಸಂಬಂಧಿಸಿದಂತೆ ಪ್ರಸ್ತಕ ಜಾರಿಯಲ್ಲಿರುವ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ನಿಯಮಗಳು 2002ರ ನಿಯಮ 12(1)ರನ್ವಯ ಇಲಾಖಾ ವ್ಯಾಪ್ತಿಗೆ ಬರುವ ಅಧಿಸೂಚಿತ ಸಂಸ್ಥೆಗಳಲ್ಲಿ ವಂಶ ಪಾರಂಪರ್ಯವಲ್ಲದ ಅರ್ಚಕರ ಮತ್ತು ವಂಶ ಪಾರಂಪರ್ಯವಲ್ಲದ ದೇವಾಲಯದ ನೌಕರರ ನೇಮಕಾತಿಯನ್ನು 58ನೇ ಪ್ರಕರಣ(ದೇವಾಲಯದ ಸಂಪ್ರದಾಯಗಳು, ಆಚರಣೆಗಳು ಮತ್ತು ಪದ್ಧತಿಗಳನ್ನು ಪಾಲಿಸುವುದು)ಗಳಿಗೆ ಒಳಪಟ್ಟು ಸರ್ಕಾರದ ಮೀಸಲಾತಿ ನಿಯಮಗಳ ಅನುಸಾರ ಮಾಡತಕ್ಕದ್ದು ಎಂದು ಸ್ಪಷ್ಟಪಡಿಸಿರುತ್ತದೆ. ಅದರಂತೆ ಕ್ರಮ ಕೈಗೊಳ್ಳಲಾಗುತ್ತದೆ.

ಸಂಖ್ಯೆ: ಕಂಇ 87 ಮುಸಪ್ರ 2021

(ಕೋಟಾ ಶ್ರೀನಿವಾಸ ಪೂಜಾರಿ)
ಹಿಂದೂ ಧಾರ್ಮಿಕ ಮತ್ತು ಧರ್ಮಾದಾಯ ದತ್ತಿ
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.